# ಕರ್ನಾಟಕ ಸರ್ಕಾರ

ಸಂಖ್ಯೆ:ಸಿಆಸುಇ 48 ಹೆಚ್‌ಹೆಚ್‌ಎಲ್ 2011

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ: 26-12-2011

## ಅಧಿಸೂಚನೆ

ಕರ್ನಾಟಕ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾಗಿದ್ದ ಶ್ರೀ ಎಸ್. ಬಂಗಾರಪ್ಪ ಇವರು ದಿನಾಂಕ: 26-12-2011ರ ಸೋಮವಾರದಂದು ಪೂರ್ವಾಹ್ನ 0.45 ಕ್ಕೆ ನಿಧನರಾದ ವಿಷಯವನ್ನು ಕರ್ನಾಟಕ ರಾಜ್ಯ ಸರ್ಕಾರವು ತೀವ್ರ ಸಂತಾಪದಿಂದ ಈ ಮೂಲಕ ಪ್ರಕಟಿಸಿದೆ.

ಮುಂದುವರಿಸಿ, ದಿವಂಗತರ ಅಂತ್ಯಕ್ರಿಯೆಯನ್ನು ದಿನಾಂಕ: 27-12-2011ರಂದು ಮಂಗಳವಾರ ಹುಟ್ಟೂರಾದ ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನಲ್ಲಿ **ಸಕಲ ಸರ್ಕಾರಿ ಗೌರವಗಳೊಂದಿಗೆ** ನೆರವೇರಿಸಲಾಗುವುದು.

ದಿವಂಗತರ ಗೌರವಾರ್ಥವಾಗಿ **ದಿನಾಂಕ: 26-12-2011 ರಂದು ಸೋಮವಾರ ರಾಜ್ಯದಾದ್ಯಂತ ಸಾರ್ವಜನಿಕ ರಜೆಯನ್ನು ಘೋಷಿಸಲಾಗಿದ್ದು, ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳನ್ನು ಮತ್ತು ಎಲ್ಲಾ ಶಾಲಾ ಕಾಲೇಜುಗಳನ್ನು** (ಅನುದಾನ ಪಡೆಯುವ ಎಲ್ಲಾ ವಿದ್ಯಾ ಸಂಸ್ಥೆಗಳೂ ಸೇರಿದಂತೆ) **ಮುಚ್ಚಲು ಆದೇಶಿಸಿದೆ** ಮತ್ತು ದಿನಾಂಕ: 26-12-2011 ರಿಂದ 28-12-2011 ರವರೆಗೆ (ಉಭಯ ದಿನಗಳು ಸೇರಿ) 3 ದಿನಗಳು ಶೋಕವನ್ನು ಆಚರಿಸಲಾಗುವುದು. ಈ ಅವಧಿಯಲ್ಲಿ ಯಾವುದೇ ಸಾರ್ವಜನಿಕ ಮನರಂಜನಾ ಕಾರ್ಯಕ್ರಮಗಳು ಇರುವುದಿಲ್ಲ. ರಾಜ್ಯ ಸರ್ಕಾರದ ಎಲ್ಲಾ ಕಟ್ಟಡಗಳ ಮೇಲೆ ರಾಷ್ಟ್ರಧ್ವಜವನ್ನು ಅರ್ಧ ಮಟ್ಟದಲ್ಲಿ ಹಾರಿಸಲಾಗುವುದು.

**ದಿವಂಗತರ ಅಂತ್ಯಕ್ರಿಯೆ ನೆರವೇರುವ ದಿನದಂದು ದಿನಾಂಕ: 27-12-2011ರ ಮಂಗಳವಾರ ಶಿವಮೊಗ್ಗ ಜಿಲ್ಲೆಯಾದ್ಯಂತ ಶಾಲಾ ಕಾಲೇಜುಗಳಿಗೆ** (ಅನುದಾನ ಪಡೆಯುವ ಎಲ್ಲಾ ವಿದ್ಯಾ ಸಂಸ್ಥೆಗಳೂ ಸೇರಿದಂತೆ) **ಮಾತ್ರ ಅನ್ವಯಿಸುವಂತೆ ರಜೆಯನ್ನು ಘೋಷಿಸಲಾಗಿದೆ.**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪದ್ಮರಾಜು)
ಸರ್ಕಾರದ ಅಧೀನ ಕಾರ್ಯದರ್ಶಿಗಳು,
ಸಿಆಸುಇ(ರಾಜ್ಯ ಶಿಷ್ಟಾಚಾರ)

**ಇವರಿಗೆ:**

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಮಾನ್ಯ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು, ರಾಜ ಭವನ, ಬೆಂಗಳೂರು.
3) ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
4) ಮುಖ್ಯ ಮಾಹಿತಿ ಆಯುಕ್ತರು, ಮಾಹಿತಿ ಆಯೋಗ, ಬೆಂಗಳೂರು
5) ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
6) ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
7) ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬೆಂಗಳೂರು
8) ಕಾರ್ಯದರ್ಶಿ, ಕರ್ನಾಟಕ ಮೇಲ್ಮನವಿ ಪ್ರಾಧಿಕಾರ, ಬೆಂಗಳೂರು
9) ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
10) ಕಾರ್ಯದರ್ಶಿ, ವಿಧಾನ ಮಂಡಲ(ವಿಧಾನ ಸಭೆ/ವಿಧಾನ ಪರಿಷತ್ತು ಸಚಿವಾಲಯಗಳು)